ಕರ್ನಾಟಕ ಸರ್ಕಾರ
(ಸಾರಿಗೆ ಇಲಾಖೆ)

**ಪ್ರಾದೇಶಿಕ ಸಾರಿಗೆ ಅಧಿಕಾರಿ, ಬೆಂಗಳೂರು (ಕೇಂದ್ರ) ಮತ್ತು ಕಾರ್ಯದರ್ಶಿ, ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ಬೆಂಗಳೂರು(ಗ್ರಾಮಾಂತರ) ಜಿಲ್ಲೆ ರವರ ಕಛೇರಿ.**

2ನೇ ಮಹಡಿ, ಬಿ.ಡಿ.ಎ ವಾಣಿಜ್ಯ ಸಂಕೀರ್ಣ, ಕೋರಮಂಗಲ, ಬೆಂಗಳೂರು-560034

ಸಂ.ಪ್ರಾಸಾಪ್ರಾ/ಬೆಂ/(ಗ್ರಾ) (ನ)/ಮ.ವಾ/ಸಭೆ/**2021-22** ದಿನಾಂಕ: **01-04-2021**

## ಸಭೆಯ ಸೂಚನಾ ಪತ್ರ

ವಿಷಯ:- ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಒಕ್ಕೂಟ(ರಿ) ಇವರು ದಿನಾಂಕ: 07-04-2021 ರಿಂದ ಅನಿರ್ದಿಷ್ಟ ಅವಧಿಗೆ ಮುಷ್ಕರ ಕರೆ ನೀಡಿರುವ ಬಗ್ಗೆ.

ಉಲ್ಲೇಖ:- ಸಾರಿಗೆ ಆಯುಕ್ತರ ಪತ್ರ ಸಂ: ರಾಸಾಪ್ರಾ-6/ಪೆಆರ್- /2020-21 ದಿನಾಂಕ: 06-03-2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ನೌಕರರಿಗೆ ದಿನಾಂಕ 07-04-2021 ರಿಂದ ಅನಿರ್ಧಿಷಟ ಅವಧಿಗೆ ಮುಷ್ಕರ ಮಾಡುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಒಕ್ಕೂಟ (ರಿ) ಕರೆ ನೀಡಿರುವ ಹಿನ್ನಲೆಯಲ್ಲಿ ರಾಜ್ಯದಲ್ಲಿ ದಿನಾಂಕ: 07-04-2021 ರಿಂದ ಸಾರ್ವಜನಿಕರಿಗೆ ಸಾರಿಗೆ ಸೌಲಭ್ಯ ನೀಡುವಲ್ಲಿ ಯಾವುದೇ ವೈಫಲ್ಯಗಳು ಆಗಬಾರದೆಂಬ ದೃಷ್ಟಿಯಿಂದ ಖಾಸಗಿ ಪ್ರಯಾಣಿಕರ ವಾಹನಗಳಾದ **ಪ್ರವಾಸಿ ವಾಹನಗಳು, ಒಪ್ಪಂದ ವಾಹನಗಳು, ಖಾಸಗಿ ಸೇವಾ ವಾಹನಗಳು ಮತ್ತು ಶಾಲಾ ವಾಹನಗಳನ್ನು** ಮುಷ್ಕರದ ಅವಧಿಯಲ್ಲಿ ಬಳಸಿಕೊಂಡು ಸಾರ್ವಜನಿಕರಿಗೆ ಸೂಕ್ತ ಸಾರಿಗೆ ಸೌಲಭ್ಯವನ್ನು ಒದಗಿಸಲು ಆಯಾ ಜಿಲ್ಲಾಡಳಿತಗಳು ಸೂಕ್ತ ಕ್ರಮ ಜರುಗಿಸಬೇಕಾಗಿರುವುದರಿಂದ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಕಾರ್ಯದರ್ಶಿಗಳು ಸಂಬಂದಪಟ್ಟ ಖಾಸಗಿ ಪ್ರಯಾಣಿಕ ವಾಹನಗಳ ಪ್ರವರ್ತಕರ ಸಂಘಗಳ ಪ್ರತಿನಿಧಿಗಳು ಹಾಗೂ ಪ್ರವರ್ತಕರೊಂದಿಗೆ ಈ ಬಗ್ಗೆ ಸಭೆ ನಡೆಸಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ನೌಕರರ ಮುಷ್ಕರದ ಅವಧಿಯಲ್ಲಿ ಸಾರಿಗೆ ನಿಗಮಗಳು ಆಚರಣೆ ಮಾಡುತ್ತಿದ್ದ ಪ್ರಮುಖ ಮಾರ್ಗಗಳಲ್ಲಿ ಖಾಸಗಿ ಪ್ರಯಾಣಿಕ ವಾಹನಗಳು ನಿಗದಿತ ಮಾರ್ಗಗಳಲ್ಲಿ ಸಂಚರಿಸಲು ಅನುಕೂಲವಾಗುವಂತೆ ಸದರಿ ವಾಹನಗಳಿಗೆ ಮೋಟಾರು ವಾಹನ ಕಾಯ್ದೆ 1988 ರ ಸೆಕ್ಷನ್ 87(1)(ಸಿ) ರಡಿಯಲ್ಲಿ ತಾತ್ಕಾಲಿಕ ರಹದಾರಿಯನ್ನು ಆಯಾ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಕಾರ್ಯದರ್ಶಿಗಳು ತುರ್ತಾಗಿ ಮಂಜೂರು ಮಾಡಬೇಕೆಂದು ಸಾರಿಗೆ ಆಯುಕ್ತರು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುತ್ತಾರೆ.

ಈ ಹಿನ್ನಲೆಯಲ್ಲಿ **ಕಾರ್ಯದರ್ಶಿ, ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ಬೆಂಗಳೂರು (ಗ್ರಾಮಾಂತರ) ಮತ್ತು ಬೆಂಗಳೂರು (ನಗರ) ಒಳಗೊಂಡಂತೆ, ಪ್ರಾದೇಶಿಕ ಸಾರಿಗೆ ಕಛೇರಿ, ಬೆಂಗಳೂರು (ದಕ್ಷಿಣ) ಜಯನಗರ ರವರು** ದಿನಾಂಕ **05-04-2021** ರಂದು 11-00 ಗಂಟೆಗೆ **ಪ್ರಾದೇಶಿಕ ಸಾರಿಗೆ ಕಛೇರಿ, ಬೆಂಗಳೂರು (ದಕ್ಷಿಣ) ಕಛೇರಿಯ ಸಭಾಂಗಣದಲ್ಲಿ** ಸಭೆ ನಿಗಧಿಗೊಳಿಸಿದ್ದು ತಾವುಗಳು ಸದರಿ ಸಭೆಯಲ್ಲಿ ಭಾಗವಹಿಸುವಂತೆ ಕೋರುತ್ತೇನೆ.

ಕಾರ್ಯದರ್ಶಿ,
ಪ್ರಾದೇಶಿಕ ಸಾರಿಗೆ ಪ್ರಾಧಿಕಾರ,
ಬೆಂಗಳೂರು (ಗ್ರಾಮಾಂತರ) ಮತ್ತು
ಪ್ರಾ.ಸಾ.ಅ, ಬೆಂಗಳೂರು (ಕೇಂದ್ರ)

ಇವರಿಗೆ,

--------------------------------

--------------------------------

--------------------------------

--------------------------------